# ಕರ್ನಾಟಕ ವಿಧಾನ ಪರಿಷತ್ತು

ಪ್ರಸ್ತುತ ರಾಜ್ಯದಲ್ಲೆಡೆ ಮಳೆಗಾಲದಿಂದಾಗಿ ಮಹಾಮಾರಿ ಡೆಂಗ್ಯೂ ಪ್ರಕರಣಗಳು ಹೆಚ್ಚುತ್ತಿದ್ದು, 10,000 ಗಡಿದಾಟುತ್ತಿರುವುದು ಆತಂಕವನ್ನುಂಟು ಮಾಡಿದೆ. ಹಳ್ಳಿ ಮತ್ತು ನಗರ ಪ್ರದೇಶಗಳಲ್ಲಿ ಕೊಳಚೆ ಪ್ರದೇಶಗಳನ್ನು ಸ್ವಚ್ಛಗೊಳಿಸುವಲ್ಲಿ ಮಹಾನಗರ ಪಾಲಿಕೆಗಳು ಮತ್ತು ಗ್ರಾಮ ಪಂಚಾಯಿತಿಗಳು ಕಳಪೆ ಪ್ರದರ್ಶನವನ್ನು ತೋರುತ್ತಿವೆ. ಇದರ ಮಧ್ಯೆ ಸಾರ್ವಜನಿಕರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವಲ್ಲಿ ಆಧಾರ ಸ್ಥಂಭವಾಗಿ ಕಾರ್ಯ ನಿರ್ವಹಿಸುವ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಖಾಲಿ ಇರುವುದರಿಂದ ತಳಮಟ್ಟದಲ್ಲಿ ಸಾಂಕ್ರಾಮಿಕ ರೋಗಗಳನ್ನು ತಡೆಯುವಲ್ಲಿ ವಿಫಲವಾಗುತ್ತಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ.

ಪ್ರಸ್ತುತ ರಾಜ್ಯಾದ್ಯಂತ 2843 ಕ್ಕಿಂತಲೂ ಹೆಚ್ಚು ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಖಾಲಿಯಿವೆ. 2016 ರಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಿದ್ದು ಬಿಟ್ಟರೆ ಮತ್ತೆ ಇಲ್ಲಿಯವರೆಗೆ ಈ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ಮುಂದಾಗಿಲ್ಲ. ಇದರಿಂದಾಗಿ ಹೆಲ್ತ್ ಇನ್ಸಪೆಕ್ಟರ್ ಕೋರ್ಸ್ ಮುಗಿಸಿ ಆನೇಕ ವರ್ಷಗಳಿಂದ ಸಾವಿರಾರು ಉದ್ಯೋಗಾಕಾಂಕ್ಷಿಗಳು ಜಾತಕ ಪಕ್ಷಿಗಳಂತೆ ಕಾಯುತ್ತಿದ್ದರೂ ಇಲ್ಲಿಯವರೆಗೆ ಸರ್ಕಾರ ಮಾತ್ರ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಂಡಿಲ್ಲ.

ಈ ನಿಲುವಿನಿಂದಾಗಿ ಸಾಂಕ್ರಾಮಿಕ ರೋಗಗಳಾದ ಡೆಂಗ್ಯು, ಚಿಕೂನ್ ಗುನ್ಯಾ, ಮಲೇರಿಯಾ, ಎಚ್ ಐ ವಿ, ಪೋಲಿಯೋ ಸೇರಿ ಹೆಚ್ಚುತ್ತಿರುವ ಆನೇಕ ರೋಗಗಳನ್ನು ತಡೆಯುವಲ್ಲಿ, ಜನರಲ್ಲಿ ಅರಿವು ಮೂಡಿಸುವಲ್ಲಿ ಹಾಗೂ ಅನೇಕ ಸರಕಾರಿ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನ, ಜಾಗೃತಿ ಮೂಡಿಸುವಲ್ಲಿ ಮಹತ್ವದ ಪಾತ್ರ ವಹಿಸುವ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳ ಕೊರತೆಯಿಂದಾಗಿ ಸರ್ಕಾರ ವಿಫಲವಾಗುತ್ತಿದೆ. ಆದ್ದರಿಂದ ತುರ್ತಾಗಿ ಪ್ರಸ್ತುತ ಡೆಂಗ್ಯೂ ರೋಗವನ್ನು ತಡೆಗಟ್ಟುವ ಸಲುವಾಗಿ ತಾತ್ಕಾಲಿಕವಾಗಿ ಹೊರಗುತ್ತಿಗೆ ಆಧಾರದ ಮೇಲಾದರೂ ನೇಮಕ ಮಾಡಿಕೊಂಡು ನಂತರ ಈ ಹುದ್ದೆಗಳನ್ನು ಭರ್ತಿ ಮಾಡಲು ಶೀಘ್ರವಾಗಿ ಕ್ರಮಕೈಗೊಳ್ಳುವ ಬಗ್ಗೆ ಕರ್ನಾಟಕ ವಿಧಾನ ಪರಿಷತ್ತು ಮಾನ್ಯ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-

*****

**ಉತ್ತರ:-**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನಾರ್ಮ್ಸ್ ಪ್ರಕಾರ ಸಮತಟ್ಟು ಪ್ರದೇಶದಲ್ಲಿ 30000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಹಾಗೂ ಗುಡ್ಡಗಾಡು ಪ್ರದೇಶದಲ್ಲಿ 20000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಿದ್ದು, 5000 ಜನಸಂಖ್ಯೆಗೆ ಒಂದು ಉಪಕೇಂದ್ರವನ್ನು ಸ್ಥಾಪನೆ ಮಾಡಲಾಗಿರುತ್ತದೆ. ಒಂದು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಬರುವ ಎರಡು ಉಪಕೇಂದ್ರಕ್ಕೆ ಒಬ್ಬರು ಆರೋಗ್ಯ ನಿರೀಕ್ಷಣಾಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ. ಹಾಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳು ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳು, ಲಸಿಕಾ ಕಾರ್ಯಕ್ರಮಗಳ ಬಗ್ಗೆ ಹಾಗೂ ಎಲ್ಲಾ ವಯೋಮಾನದ ಜನ ಸಮುದಾಯಕ್ಕೆ ಉತ್ತಮ ಆರೋಗ್ಯವನ್ನು ಹೊಂದಲು ಜಾರಿಗೊಳಿಸಲಾಗಿರುವ ಎಲ್ಲಾ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವುದು, ಅನುಷ್ಠಾನಗೊಳಿಸುವುದು ಮತ್ತು ಇತರೆ ಆರೋಗ್ಯ ಚಟುವಟಿಕೆಗಳ ಕೆಲಸವನ್ನು ನಿರ್ವಹಿಸುತ್ತಾರೆ.

ಇಲಾಖೆಯಲ್ಲಿ 5,944 ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಮಂಜೂರಾತಿಯಾಗಿದ್ದು, ಅದರಲ್ಲಿ 3,095 ಆರೋಗ್ಯ ನಿರೀಕ್ಷಣಾಧಿಕಾರಿಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿದ್ದು, 2849 ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಖಾಲಿ ಇರುತ್ತವೆ. ಸದರಿ ಹುದ್ದೆಗಳು ಖಾಲಿ ಇದ್ದರೂ ಸಹ

.....2

ಈ ಹಿಂದೆ ಕೋವಿಡ್-19 ಸಾಂಕ್ರಾಮಿಕ ರೋಗವು ಹರಡಿದ್ದ ಸಮಯದಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಆರೋಗ್ಯ ನಿರೀಕ್ಷಣಾಧಿಕಾರಿಗಳು ಉತ್ತಮ ಕಾರ್ಯನಿರ್ವಹಿಸಿ ಕೋವಿಡ್-19 ಸಾಂಕ್ರಾಮಿಕ ರೋಗವನ್ನು ಹತೋಟಿಯಲ್ಲಿಡಲು ಪ್ರಮುಖ ಪಾತ್ರವನ್ನು ನಿರ್ವಹಿಸಿರುವುದು ಶ್ಲಾಘನೀಯವಾಗಿರುತ್ತದೆ ಮತ್ತು ಸಾಕ್ಷಿ ಬದ್ಧವಾಗಿರುತ್ತದೆ. ಇದರ ಜೊತೆಗೆ ಆರೋಗ್ಯ ನಿರೀಕ್ಷಣಾಧಿಕಾರಿಗಳ ಖಾಲಿ ಹುದ್ದೆಗಳ ಸ್ಥಳದಲ್ಲಿ ಇತರೆ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿಗಳನ್ನು ಕಾರ್ಯವ್ಯವಸ್ಥೆ ಮಾಡಲಾಗಿರುತ್ತದೆ ಮತ್ತು ಇದರ ಜೊತೆಗೆ ಸಮುದಾಯ ಆರೋಗ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತರು ಸಹ ಕಾರ್ಯನಿರ್ವಹಿಸುತ್ತಿರುತ್ತಾರೆ. ಹಾಲಿ ಖಾಲಿ ಹುದ್ದೆಗಳಿಂದ ಯಾವುದೇ ಆರೋಗ್ಯ ಕಾರ್ಯಕ್ರಮಗಳಿಗೆ ತೊಂದರೆಯಾಗದಂತೆ ಸಾಂಕ್ರಾಮಿಕ ರೋಗಗಳನ್ನು ತಡೆಯುವಲ್ಲಿ ಹಾಲಿ ಕಾರ್ಯನಿರತ ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಇತರೆ ವಿವಿಧ ಅರೆವೈದ್ಯಕೀಯ ಆರೋಗ್ಯ ಸಿಬ್ಬಂದಿಗಳಿಂದ ಸಮರ್ಪಕವಾಗಿ ಉತ್ತಮ ಆರೋಗ್ಯ ಸೇವೆಯನ್ನು ಸಾರ್ವಜನಿಕರಿಗೆ ನೀಡಲಾಗುತ್ತಿದೆ.

ಮುಂದುವರೆದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ 2849 ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಹಾಗೂ ನೇರ ನೇಮಕಾತಿ ಮೂಲಕ ಭರ್ತಿ ಮಾಡುವವರೆಗೆ ಖಾಲಿ ಇರುವ ಶೇ. 80 ರಷ್ಟು ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

**ಸಂಖ್ಯೆ:** ಆಕುಕ 185 ಹೆಚ್‌ಎಸ್‌ಎಂ 2024

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು